ಒಟ್ಟು ಪಾವತಿಗೆ ಬಾಕಿಯಿರುವ ಮೊಬಲಗು ಹೀಗಿದೆ.

1. ವೇತನ ಪಾವತಿಗೆ ಬಾಕಿ	ರೂ. 75.96
2. ಗಳಿಗೆ ರಜೆ ನಗದೀಕರಣ ಇತ್ಯಾದಿ	ರೂ. 270.03
	ರೂ. 345.99

ಇ) ವೇತನ ಪರಿಷ್ಕರಣೆಯಿಂದಾಗಿ ಸಂಬಳ ಪಾವತಿ ಮಾಡಲು ಬೇಕಾಗುವಂತಹ ಅನುದಾನ ಹೆಚ್ಚಿಗೆ ಬೇಕಾಗಿರುತ್ತದೆ. ಆದ್ದರಿಂದ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಲು ಮತ್ತು ಬಾಕಿ ವೇತನ ಪಾವತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ.

ಮಂಡ್ಯ ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿ

944 - ಶ್ರೀ ಆತ್ಮಾನಂತ ಎಂ.ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರದಲ್ಲಿನ ಜಿಲ್ಲಾ ಆಸ್ಪತ್ರೆಯನ್ನು ಅಭಿವೃದ್ಧಿಗೊಳಿಸಲಾಗುವುದೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಮಂಡ್ಯ ಜಿಲ್ಲಾ ಆಸ್ಪತ್ರೆಯನ್ನು 310 ಹಾಸಿಗೆಗಳಿಂದ 400 ಹಾಸಿಗೆಗಳಿಗೆ ಉನ್ನತೀಕರಿಸಿ ರೂ. 408 ಲಕ್ಷ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ. ಈ ಆಸ್ಪತ್ರೆಗೆ ಅಗತ್ಯವಿರುವ ವೈದ್ಯಕೀಯ ಸಲಕರಣೆಗಳನ್ನು ಸಹ ಯೋಜನೆಯಡಿ ಒದಗಿಸಲಾಗುತ್ತಿದೆ.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ತುರ್ತು ಚಿಕಿತ್ಸೆ ವ್ಯವಸ್ಥೆ

947 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲ ಪಟ್ಟಣವು ರಾಷ್ಟ್ರೀಯ ಹೆದ್ದಾರಿಗಳಾದ 4 ಮತ್ತು 48ರಲ್ಲಿದ್ದು ಪ್ರತಿನಿತ್ಯ ಸಾವಿರಾರು ವಾಹನಗಳ ಸಂಚಾರದಿಂದ ಆಕಸ್ಮಿಕ ಅಪಘಾತಗಳು ಉಂಟಾಗಿ ಜನ ಪ್ರಾಣಹಾನಿ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ನೆಲಮಂಗಲ ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯಲ್ಲಿ ತುರ್ತು